ಕರ್ನಾಟಕ ಸರ್ಕಾರ

ಸಮಗ್ರ ಮಕ್ಕಳ ರಕ್ಷಣಾ ಯೋಜನೆ

ಸಂ:ಕೆಎಸ್‌ಐಸಿಪಿಎಸ್:ಕೋವಿಡ್–19/:2020–21

ನಿರ್ದೇಶನಾಲಯ
ಸಮಗ್ರ ಮಕ್ಕಳ ರಕ್ಷಣಾ ಯೋಜನೆ
ಬೆಂಗಳೂರು. ದಿನಾಂಕ: 18–04–2020

ಗೆ,

ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ
ಬೆಂಗಳೂರು.

ಮಾನ್ಯರೇ

ವಿಷಯ: ಸರ್ಕಾರಿ ಬಾಲಮಂದಿರಗಳಿಂದ ಪೋಷಕರ ವಶಕ್ಕೆ ನೀಡಿದ ಮಕ್ಕಳಿಗೆ ಮಧ್ಯಾಹ್ನದ ಬಿಸಿಯೂಟ ಕಾರ್ಯಕ್ರಮದಡಿಯಲ್ಲಿ ಆಹಾರ ಸಾಮಾಗ್ರಿಗಳನ್ನು ವಿತರಿಸಲು ನಿರ್ದೇಶನ ನೀಡುವ ಕುರಿತು.

ಉಲ್ಲೇಖ: ಸಂ:ಕೆಎಸ್‌ಐಸಿಪಿಎಸ್:ಕೋವಿಡ್–19:2020–21 ದಿನಾಂಕ: 17–04–2020

*****

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ ಕೋವಿಡ್–19 ತುರ್ತು ಪರಿಸ್ಥಿತಿಯ ಸಂದರ್ಭದಲ್ಲಿ ಸರ್ಕಾರಿ ಬಾಲಮಂದಿರಗಳಲ್ಲಿದ್ದ ಮಕ್ಕಳನ್ನು ಅವರವರ ಪೋಷಕರೊಂದಿಗೆ ಮನೆಗೆ ಕಳುಹಿಸಿ ಕೊಡಲಾಗಿದೆ.

ಸದರಿ ಮಕ್ಕಳು ಸರ್ಕಾರಿ ಹಾಗೂ ಅನುದಾನಿತ ಶಾಲೆಗಳಲ್ಲಿ ಓದುತ್ತಿದ್ದು, ಈ ಮಕ್ಕಳಿಗೆ ಸರ್ಕಾರದ ಮಧ್ಯಾಹ್ನದ ಬಿಸಿಯೂಟ ಕಾರ್ಯಕ್ರಮದಡಿ ಆಹಾರ ಸಾಮಾಗ್ರಿಗಳನ್ನು ಕೊಡಬಹುದಾಗಿರುತ್ತದೆ. ಆದರೆ ಪ್ರಸ್ತುತ ಮಕ್ಕಳು ತಾವು ಓದುತ್ತಿದ್ದ ಸ್ಥಳದಿಂದ ತಮ್ಮ ಮೂಲ ಸ್ಥಳಗಳಿಗೆ ತೆರಳಿರುವುದರಿಂದ ಅವರಿಗೆ ಆಹಾರ ಸಾಮಾಗ್ರಿಗಳನ್ನು ಅವರು ಓದುತ್ತಿದ್ದ ಶಾಲೆಗಳಿಂದ ಕೊಡಿಸುವುದು ಕಷ್ಟ ಸಾಧ್ಯವಾಗುತ್ತದೆ. ಈ ಹಿನ್ನಲೆಯಲ್ಲಿ ಜಿಲ್ಲೆಯಲ್ಲಿನ ಉಪನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ ಇವರ ಸಹಯೋಗದೊಂದಿಗೆ ಬಾಲಮಂದಿರಗಳಿಂದ ಪ್ರಸ್ತುತ ಪೋಷಕರ ವಶಕ್ಕೆ ನೀಡಲಾದ ಮಕ್ಕಳಿಗೆ ಪ್ರಸ್ತುತ ಅವರು ಇರುವ ಊರಿನ ಸರ್ಕಾರಿ ಶಾಲೆಗಳ ಮುಖಾಂತರ ಮಧ್ಯಾಹ್ನದ ಬಿಸಿಯೂಟ ಕಾರ್ಯಕ್ರಮದಡಿ ಆಹಾರ ಸಾಮಾಗ್ರಿಗಳನ್ನು ವಿತರಿಸಲು ಕ್ರಮಕೈಗೊಳ್ಳಲು ತಿಳಿಸಿ ಉಲ್ಲೇಖದನ್ವಯ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳಿಗೆ ಪತ್ರ ಬರೆಯಲಾಗಿರುತ್ತದೆ.

ಆದರೆ ಕೆಲ ಉಪನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ ಇವರು ತಮ್ಮ ಇಲಾಖೆಯ ಆಯುಕ್ತರ ಆದೇಶವಿಲ್ಲದೆ ಆಹಾರ ಸಾಮಗ್ರಿ ವಿತರಿಸಲು ಸಾಧ್ಯವಾಗುವುದಿಲ್ಲ ಎಂದು ತಿಳಿಸಿರುತ್ತಾರೆಂದು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳಿಂದ ನಮ್ಮ ಗಮನಕ್ಕೆ ಬಂದಿರುತ್ತದೆ.

ಈ ಹಿನ್ನೆಲೆಯಲ್ಲಿ ಸರ್ಕಾರಿ ಬಾಲಮಂದಿರಗಳಿಂದ ಪೋಷಕರ ವಶಕ್ಕೆ ನೀಡಿದ ಅರ್ಹ ಮಕ್ಕಳಿಗೆ ಪ್ರಸ್ತುತ ಮಕ್ಕಳು ವಾಸವಾಗಿರುವ ಸ್ಥಳದ ಸ್ಥಳೀಯ ಸರ್ಕಾರಿ ಶಾಲೆಗಳ ಮೂಲಕ ಮಧ್ಯಾಹ್ನ ಬಿಸಿ ಊಟದ ಆಹಾರ ಸಾಮಾಗ್ರಿಗಳನ್ನು ವಿತರಿಸಲು ತಮ್ಮ ಅಧೀನದ ಎಲ್ಲ ಉಪನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ ಇವರಿಗೆ ಸೂಕ್ತ ನಿರ್ದೇಶನ ನೀಡಲು ಕೋರಿದೆ(ಉಲ್ಲೇಖಿತ ಪತ್ರದ ಪ್ರತಿಯನ್ನು ಈ ಪತ್ರಕ್ಕೆ ಲಗತ್ತಿಸಿ ತಮ್ಮ ಮಾಹಿತಿಗಾಗಿ ಸಲ್ಲಿಸಿದೆ).

ತಮ್ಮ ವಿಶ್ವಾಸಿ,

18.04.2020

ನಿರ್ದೇಶಕರು

ಸಮಗ್ರ ಮಕ್ಕಳ ರಕ್ಷಣಾ ಯೋಜನೆ

REDMI NOTE 8
AI QUAD CAMERA